**ಸಾಕ್ಷಿಗೆ ದಿನಾಂಕಃ 11.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.ಹೆಚ್.ಎಸ್.ಜಿ ರವರಿಂದಃ**

1) ನಾನು ಈ ಪ್ರಕರಣದಲ್ಲಿ **1** ನೇ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, ಘಟನಾ **ಸ್ಥಳದ ಪಂಚನಾಮೆಯನ್ನು** ನಿ.ಪಿ.**3** ಎಂದು, ವಾಹನಗಳನ್ನು ವಶಕ್ಕೆ ಪಡೆದ ಬಗ್ಗೆ ಇರುವ ಪಂಚನಾಮೆಯನ್ನು ನಿ.ಪಿ.**4** ಎಂದು, **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**5** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**6** ಎಂದು, ಮತ್ತು ಅಪಘಾತದ ವಿವರವನ್ನು ನಿ.ಪಿ.**7** ಎಂದು, ಶವ ತನಿಖಾ ವರದಿಯನ್ನು ನಿ.ಪಿ.**8** ಎಂದು, ಶವ ಪರೀಕ್ಷಾ ವರದಿಯನ್ನು ನಿ.ಪಿ.**9** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**10** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.1 ರಿಂದ ನಿ.ಪಿ.10 ಎಂದು ಗುರುತು ಆಗಿರುವ ದಾಖಲೆಗಳು ಭದ್ರಾವತಿ ಗ್ರಾಮಾಂತರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಅಪಘಾತದಲ್ಲಿ ಮರಣ ಹೊಂದಿದ ಮಂಜುನಾಥ ರವರ ಆಧಾರ್ ಕಾರ್ಡ್ ಮತ್ತು **3** ನೇ ಅರ್ಜಿದಾರರ ಆಧಾರ್ ಕಾರ್ಡ್ ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**11** ರಿಂದ ನಿ.ಪಿ.**13** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**<u>ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.